ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಜಮೀನುಗಳ ಪೋಡಿ ಮಾಡದಿರುವ ಕುರಿತು

ಶ್ರೀ ತಿಪ್ಪೇಸ್ವಾಮಿ ಕೆ.ಎ. (ನಾಮನಿರ್ದೇಶನ ಹೊಂದಿದವರು):-

237 (289) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಮತ್ತು ದರ್ಖಾಸ್ತು ಮಂಜೂರಾದ ಅಂಶಿಕ ಜಮೀನಗಳ ಖಾತೆದಾರರ ಪೋಡಿ ಮಾಡದೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವುದು ಸಾಧ್ಯವಾಗದಿರುವ ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದಿರಲು ಕಾರಣಗಳೇನು;

(ಆ) ಜನ ಸಾಮಾನ್ಯರಿಗೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ನೆರವಾಗಲು, ಪೋಡಿಮುಕ್ತ ಅಭಿಯಾನವನ್ನು ಯಾವಾಗ ಪ್ರಾರಂಭಿಸಲಾಯಿತು; ಈ ಅಭಿಯಾನದಂತೆ ತುಮಕೂರು ಜಿಲ್ಲೆಯಲ್ಲಿ ಭೂಮಾಪನಾ ಕಾರ್ಯ ಪೂರ್ಣಗೊಂಡ ಗ್ರಾಮಗಳು ಯಾವುವು; (ವಿವರಗಳನ್ನು ನೀಡುವುದು)

(ಇ) ಶಿರಾ ತಾಲ್ಲೂಕಿನಲ್ಲಿ ಭೂಮಾಪನಾ ಕಾರ್ಯ ಪೂರ್ಣಗೊಂಡ ಗ್ರಾಮಗಳಲ್ಲಿ ಖಾತೆದಾರರಿಗೆ ಪಹಣಿ ದಾಖಲಿಸಿ, ಪ°ಣಿ ಪತ್ರ ನೀಡುವ ಕಾರ್ಯವನ್ನು ಪೂರ್ಣಗೊಳಿಸಲಾಗಿದೆಯೇ? (ವಿವರಗಳನ್ನು ನೀಡುವುದು)